# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಸೋಮಶೇಖರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮೋಘಾ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅ.ಸ.ಪ.ಸಂ. ಉಪಲೋಕ್/ಜಿಎಲ್‌ಬಿ-2144/2014/ಡಿಆರ್‌ಇ-3 ದಿನಾಂಕ:07-09-2016

**ಪ್ರಸ್ತಾವನೆ:**

ಮೇಲೆ ಓದಲಾದ ಉಪ ನಿಬಂಧಕರು, ವಿಚಾರಣೆಗಳು-3 ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ:20-08-2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಸೋಮಶೇಖರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮೋಘಾ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ 2013-14 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಸುಮಾರು 40 ರಿಂದ 50 ಲಕ್ಷ ಅನುದಾನವನ್ನು ದುರುಪಯೋಗ ಪಡಿಸಲಾಗಿರುತ್ತದೆ. 4 ರಿಂದ 5 ಉದ್ಯೋಗ ಚೀಟಿಗಳನ್ನು ಒಬ್ಬರ ಹೆಸರಿನಲ್ಲಿ ವಿತರಿಸಿ ಹಣ ದುರುಪಯೋಗ ಮಾಡಲಾಗಿರುತ್ತದೆ ಎಂದು ದೂರುದಾರರಾದ ಶ್ರೀ ರಾಜಕುಮಾರ್ ಪಾಟೀಲ್ ತಂದೆ ಗುರುಲಿಂಗಪ್ಪ ಪಾಟೀಲ್ ನಿಂಗದಹಳ್ಳಿ, ಮೋಘಾ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆ ಅನುಸಾರ

"ಕಡತ ಸಂಖ್ಯೆ:8 ರಲ್ಲಿ ಶ್ರೀಮತಿ ಲಕ್ಷ್ಮಿ ಗಂಡ ನಿಂಗರೆಡ್ಡಿ, ಗ್ರಾಮ ಪಂಚಾಯಿತಿ ಸದಸ್ಯರು, ಇವರ ಸಹಿಯು ಕಂಡು ಬರುತ್ತಿದ್ದು, ಉಳಿದ ಕಡತಗಳಲ್ಲಿ ಇವರ ಹೆಬ್ಬೆಟ್ಟು ಗುರುತುಗಳು ಕಂಡು ಬರುತ್ತದೆ.

ಕಡತ ಸಂಖ್ಯೆ 1 ರಲ್ಲಿ ಸುಗುಳಬಾಯಿ, ಇವರಿಗೆ ಸೇರಿದ ಸರ್ವೆ ನಂ.62 ರ ಜಮೀನಿನಲ್ಲಿ ಚಾನೆಲ್ ನಿರ್ಮಾಣ ಕಾಮಗಾರಿ ಅನುಷ್ಠಾನಗೊಳಿಸಲಾಗಿದ್ದು, ಆದರೆ ದಾಖಲೆಗಳಲ್ಲಿ ಸುಗುಳಬಾಯಿ ಇವರು ಫಲಾನುಭವಿ ಎಂದು ತೋರಿಸಿರುವುದಿಲ್ಲ.

ಕಡತ ಸಂಖ್ಯೆ 4 ಮತ್ತು 12 ರಲ್ಲಿ ಲಕ್ಷ್ಮಣ/ರಾಮಣ್ಣ ಅಲ್ಲಪುರ, ಇವರಿಗೆ ಸೇರಿದ ಸರ್ವೆ ನಂ.9 ರಲ್ಲಿ ಚಾನೆಲ್ ನಿರ್ಮಾಣ ಕಾಮಗಾರಿ ಮತ್ತು ಪ್ಲಾಂಟೇಷನ್ ಕೈಗೊಳ್ಳಲಾಗಿದ್ದು, ಸದರಿ ಜಾಗವು ಅಲ್ಲಪುರ ಗ್ರಾಮದಲ್ಲಿದ್ದು, ಮೋಘಾ ಗ್ರಾಮ ಪಂಚಾಯಿತಿಗೆ ಬರುವುದಿಲ್ಲ.

ಕಡತ ಸಂಖ್ಯೆ:4 ಮತ್ತು 5, 7 ಮತ್ತು 11, 9 ಮತ್ತು 10, 20 ರಿಂದ 21,22 ಮತ್ತು 23, 25 ಮತ್ತು 26, 28 ಮತ್ತು 29, 34 ಮತ್ತು 35, 13 ಮತ್ತು 33, 16 ರಿಂದ 18, 20 ರಿಂದ 29, 32,34 ರಿಂದ 48 ಕ್ಕೆ ಸೇರಿದ ಕಾಮಗಾರಿಗಳು ಬೇರೆ ಬೇರೆ ಆಗಿದ್ದರೂ ಸಹ ಅವುಗಳಿಗೆ ಒಂದೇ ಛಾಯಾ ಚಿತ್ರಗಳನ್ನು ಲಗತ್ತಿಸಲಾಗಿರುತ್ತದೆ.

ಸಾಮಾಗ್ರಿ ಬಿಲ್‌ಗಳು ದಿನಾಂಕ ರಹಿತವಾಗಿದ್ದು, ಸಾಮಾಗ್ರಿಗಳ ಖರೀದಿಯಲ್ಲಿ ಪಾರದರ್ಶಕತೆಯನ್ನು ಪಾಲಿಸಿರುವುದಿಲ್ಲ.

ಒಬ್ಬ ವ್ಯಕ್ತಿಗೆ ಒಂದಕ್ಕಿಂತ ಹೆಚ್ಚು ಉದ್ಯೋಗ ಚೀಟಿಗಳನ್ನು ವಿತರಿಸಲಾಗಿರುತ್ತದೆ."

ಶ್ರೀ ಸೋಮಶೇಖರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಇವರು ತಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವತನೆಯಿಂದ ವರ್ತಿಸಿ, ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/565/ಗ್ರಾಪಂಕಾ/2016 ಬೆಂಗಳೂರು, ದಿನಾಂಕ:-09-11-2016.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸೋಮಶೇಖರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮೋಘಾ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ.
6. ಶ್ರೀ ಸೋಮಶೇಖರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮೋಘಾ ಗ್ರಾಮ ಪಂಚಾಯಿತಿ, ಚಿಂಚೋಳಿ ತಾಲ್ಲೂಕು, ಕಲಬುರಗಿ ಜಿಲ್ಲೆ.
7. ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.